# ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ
# ಹಾಗೂ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ

ಸಂ. ಗ್ರಾಲೆ/ಸಿಬ್ಬಂದಿ/ವಿವ/28/11-12 ದಿನಾಂಕ: 15/11/2011

## -:ಅಧಿಸೂಚನೆ:-

ವಿಷಯ: ದಾವಣಗೆರೆ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಯನ್ನು ನೇರ ನೇಮಕಾತಿ ಮೂಲಕಭರ್ತಿಮಾಡುವ ಬಗ್ಗೆ.

ಉಲ್ಲೇಖ : ಸರ್ಕಾರದ ಅಧಿಸೂಚನೆ ಸಂ. ಕಂಇ 04 ಬಿಎಸ್‌ಸಿ 2011 ದಿ: 25.2.2011

* * *

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ದಾವಣಗೆರೆ ಜಿಲ್ಲಾ ಘಟಕದಲ್ಲಿ ಬರುವ ತಾಲ್ಲೂಕುಗಳಲ್ಲಿ 2009ನೇ ಸಾಲಿನಲ್ಲಿ 42 ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳ ನೇರ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗಿತ್ತು. ಸದರಿ ಹುದ್ದೆಗಳಲ್ಲಿ 2 ಹುದ್ದೆಗಳು ಖಾಲಿ ಉಳಿದಿವೆ. ಆನಂತರ ವಯೋನಿವೃತ್ತಿ, ರಾಜೀನಾಮೆ, ಮುಂಬಡ್ತಿ, ವರ್ಗಾವಣೆ ಇನ್ನಿತರೆ ಕಾರಣಗಳಿಗಾಗಿ ಹುದ್ದೆಗಳು ತೆರವಾಗಿವೆ. ಆದುದರಿಂದ, ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ರೆವಿನ್ಯೂ ಸಬಾರ್ಡಿನೇಟ್ ಬ್ರಾಂಚ್) (ಕೇಡರ್ ಅಂಡ್ ರಿಕ್ರ್ಯೂಟ್‌ಮೆಂಟ್) (ತಿದ್ದುಪಡಿ)ನಿಯಮಗಳು 2008 ಮತ್ತು 2009ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂ. ಕಂಇ 04 ಬಿಎಸ್‌ಸಿ 2011 ದಿ:25.2.2011ರಲ್ಲಿ ಅನುಮೋದನೆ ನೀಡಿದೆ. ಅದರಂತೆ, ಒಟ್ಟು **22** ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ನಿಗಧಿತ ನಮೂನೆಯಲ್ಲಿ ಎಲ್ಲಾ ವಿವರಗಳೊಂದಿಗೆ **ಅಧ್ಯಕ್ಷರು, ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ** ಇವರಿಗೆ ದಿನಾಂಕ:16.12.2011 ರಂದು 5.00 ಗಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸುವುದು. ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಮಾತ್ರ ಅಧಿಕಾರವಿರುತ್ತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

**ಹುದ್ದೆಗಳ ವಿವರ**

| ಕ್ರಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಗ್ರಾಮ ಲೆಕ್ಕಿಗ | 22 | ಪಿ.ಯು.ಸಿ. ಅಥವಾ 12ನೇ ತರಗತಿ (ಸಿಬಿಎಸ್‌ಸಿ / ಐಸಿಎಸ್‌ಇ) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು | 5800-10500 |

**ಹುದ್ದೆಗಳ ವರ್ಗೀಕರಣ**

**2009-10ನೇ ಸಾಲಿನಲ್ಲಿ ನೇರ ನೇಮಕಾತಿಯಿಂದ ಭರ್ತಿಯಾಗದೇ ಉಳಿದ ಖಾಲಿ ಹುದ್ದೆಗಳು**

| ಕ್ರಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| | | | | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಮಾ.ಸೈ. | ಕ.ಮಾ.ಅ. | ಯೋ.ನಿರಾ | ಒಟ್ಟು |
| 1 | ಗ್ರಾಮ ಲೆಕ್ಕಿಗ | 2 | ಪ.ಜಾ | - | - | - | 1 | - | - | - | 1 |
| | | | ಪ.ಪಂ. | - | - | - | - | - | - | - | - |
| | | | ಪ್ರ.1 | - | - | - | - | - | - | - | - |
| | | | ಪ್ರ.2(ಎ) | - | - | - | - | - | - | - | - |
| | | | ಪ್ರ.2(ಬಿ) | - | - | - | - | - | - | - | - |
| | | | ಪ್ರ.3(ಎ) | - | - | - | - | - | - | - | - |
| | | | ಪ್ರ.3(ಬಿ) | - | - | - | - | - | - | - | - |
| | | | ಸಾ.ಅ. | - | - | - | - | 1 | - | - | 1 |
| | | | | | | | | | | ಒಟ್ಟು | 2 |

## 2011-12ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳ ವರ್ಗೀಕರಣ

| ಕ್ರಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| | | | | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಮಾ.ಸೈ. | ಕ.ಮಾ.ಅ. | ಯೋ.ನಿರಾ | ಒಟ್ಟು |
| 1 | ಗ್ರಾಮ ಲೆಕ್ಕಿಗ | 20 | ಪ.ಜಾ | - | 1 | 1 | - | 1 | - | - | 3 |
| | | | ಪ.ಪಂ. | - | - | - | - | - | - | - | - |
| | | | ಪ್ರ.1 | - | - | 1 | - | - | - | - | 1 |
| | | | ಪ್ರ.2(ಎ) | 1 | 1 | 1 | - | - | - | - | 3 |
| | | | ಪ್ರ.2(ಬಿ) | - | - | 1 | - | - | - | - | 1 |
| | | | ಪ್ರ.3(ಎ) | - | 1 | - | - | - | - | - | 1 |
| | | | ಪ್ರ.3(ಬಿ) | - | - | 1 | - | - | - | - | 1 |
| | | | ಸಾ.ಅ. | 3 | 3 | 2 | 1 | 1 | - | - | 10 |
| | | | | | | | | | | ಒಟ್ಟು | 20 |

1) ಮಾ.ಸೈ – ಮಾಜಿ ಸೈನಿಕರು
2) ಕ.ಮಾ.ಅ– ಕನ್ನಡ ಮಾಧ್ಯಮ ಅಭ್ಯರ್ಥಿ
3) ಯೋ.ನಿರಾ– ಯೋಜನಾ ನಿರಾಶ್ರಿತರು
4) ಅಂ.ವಿ.– ಅಂಗವಿಕಲರು

## ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು :

1. **ಅರ್ಜಿಗಳನ್ನು ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು. ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.**
2. **ವಯೋಮಿತಿ** : ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

| | | | |
|---|---|---|---|
| ಪ.ಜಾ. / ಪ.ಪಂ., ಪ್ರವರ್ಗ–1 | : | ಕನಿಷ್ಠ –18 | ಗರಿಷ್ಠ–40 |
| ಹಿಂದುಳಿದ ವರ್ಗ | : | ಕನಿಷ್ಠ –18 | ಗರಿಷ್ಠ–38 |
| ಸಾಮಾನ್ಯ ವರ್ಗ | : | ಕನಿಷ್ಠ –18 | ಗರಿಷ್ಠ–35 |

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು

ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು

ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
4. ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು **ಜಿಲ್ಲಾಧಿಕಾರಿಗಳ ಕಚೇರಿಯ ವೆಬ್‌ಸೈಟ್ http://davanagere.nic.in ಯಿಂದ Download ಮಾಡಿಕೊಳ್ಳುವುದು. ಅರ್ಜಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿಯಿಂದ ಒದಗಿಸಲಾಗುವುದಿಲ್ಲ**. ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರು ನಮೂದಿಸಿರಬೇಕು.
5. ನಿಗಧಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
6. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ನೇಮಕಾತಿ ಪ್ರಾಧಿಕಾರ / ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು
7. ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವೊಂದನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಬೇಕು.
8. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
9. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

10. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಮತ್ತು ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

11. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ದಾವಣಗೆರೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.

12. ಪ.ಜಾತಿ / ಪ.ಪಂಗಡ ಮತ್ತು ಪ್ರವರ್ಗ-1 ಅಭ್ಯರ್ಥಿಗಳು ರೂ.100/- ಹಾಗೂ ಇತರರಿಗೆ ರೂ.200/- ಗಳಿಗೆ ಬ್ಯಾಂಕ್ ಡಿ.ಡಿ.ಯನ್ನು **ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ** ಇವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು ಮತ್ತು ಡಿ.ಡಿ.ಗಳನ್ನು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಮಾತ್ರ ಖರೀದಿಸತಕ್ಕದ್ದು ಹಾಗೂ **ಡಿ.ಡಿ.ಯ ಹಿಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು. ಡಿ.ಡಿ.ಗಳನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

13. ಸಹಿ ಮಾಡದಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

14. **ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.**

15. **ಅಂಚೆ ವಿಳಂಬಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಜವಾಬ್ದಾರರಾಗುವುದಿಲ್ಲ.**

16. **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು :**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳ ಪ್ರತಿಗಳನ್ನು ಅರ್ಜಿ ಸಲ್ಲಿಸುವ ದಿನಾಂಕದಂದು ನಿಗಧಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ ಪಡೆದು ಲಗತ್ತಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

| | |
|---|---|
| ಪ.ಜಾ / ಪ.ಪಂ.. ಪ್ರವರ್ಗ-1 : | ಸರ್ಕಾರದ ಅಧಿಸೂಚನೆ SWD.132.SAD97 ದಿ:8.2.2000 ಕ್ರಮವಾಗಿ ನಮೂನೆ-1 ಹಾಗೂ 2 |
| ಪ್ರವರ್ಗ2ಎ, 2ಬಿ,3ಎ, 3ಬಿ : | ಸರ್ಕಾರದ ಅಧಿಸೂಚನೆ SWD 126 BCA ದಿ: 13.12.2003 (ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದ ಮೀಸಲಾತಿ ತಿದ್ದುಪಡಿ) ನಿಯಮಗಳು 2000ರನ್ವಯ ನಮೂನೆ-3 |

**ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರಬೇಕು.**

17. **ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:**

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟದ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

18. **ಅಂಗವಿಕಲ ಕುಟುಂಬದ ಅಭ್ಯರ್ಥಿಗಳು :**

ಅಂಗವಿಕಲ ಅಭ್ಯರ್ಥಿ ಎಂದರೆ, ಸರ್ಕಾರದ ಆದೇಶ ಸಂ.ಡಿಪಿಎಆರ್ 52 ಎಸ್‌ಆರ್‌ಆರ್ 99 ದಿ: 29.11.2002ರಂತೆ

(ಎ) ಕುಷ್ಠರೋಗ ನಿವಾರಿತರು

(ಬಿ) ಶ್ರವಣ ದೋಷ ಉಳ್ಳವರು ಅಂದರೆ 70 ಡೆಸಿಬಲ್ಸ್ ಮತ್ತು ಅದಕ್ಕಿಂತ ಹೆಚ್ಚು

(ಸಿ) ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾಗಿರುವವರು

(ಡಿ) ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

(ಇ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.

ಸರ್ಕಾರದ ಆದೇಶ ಸಂ. ಡಿಪಿಎಆರ್ 07 ಸೇಸ್ಥೆಅ 94 ದಿನಾಂಕ: 13.9.95 ರಲ್ಲಿ ನಿಗಧಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗಧಿಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದುಕೊಂಡಿರಬೇಕು.

19. **ಗ್ರಾಮೀಣ ಅಭ್ಯರ್ಥಿಗಳು :**

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ಪತ್ರವನ್ನು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ

ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದು ಅದರ ಒಂದೊಂದು ಫೋಟೋ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2 ಬಿ, 3ಎ, 3 ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

21. **ಅರ್ಹತಾ ಷರತ್ತುಗಳು :**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹ ರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

22. **ಕೆಳಕಂಡ ದಾಖಲೆಗಳನ್ನು ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂದು ಖಚಿತಪಡಿಸಿಕೊಳ್ಳುವುದು.**

*. ಹುದ್ದೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ

* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ

* ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಮೀಸಲಾತಿ ಕೋರಿದ್ದಲ್ಲಿ)

* ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)

* ಗ್ರಾಮೀಣ ಮೀಸಲಾತಿ ಪ್ರಮಾಣಪತ್ರ ನಮೂನೆ-1 ರಲ್ಲಿ 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)

* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)

* ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ

**ಮೇಲ್ಕಂಡಂತೆ ನಿಗಧಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

24. **ಇತರೆ ಸೂಚನೆಗಳು :**

1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

2) ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಅ ದಿನಾಂಕದ ಮಾರನೇಯ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

3) **ಅಪೂರ್ಣ ಮಾಹಿತಿ ಇರುವ ಅರ್ಜಿಗಳನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸಲಾಗುವುದು.**

(ಎಸ್.ಎಸ್.ಪಟ್ಟಣಶೆಟ್ಟಿ),
ಅಧ್ಯಕ್ಷರು, ಗ್ರಾಮ ಲೆಕ್ಕಿಗರ ನೇಮಕಾತಿ
ಆಯ್ಕೆ ಪ್ರಾಧಿಕಾರ ಮತ್ತು
ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.

# ದಾವಣಗೆರೆ ಜಿಲ್ಲೆ

## ಗ್ರಾಮ ಲೆಕ್ಕಿಗರ ನೇಮಕಾತಿಗೆ ಸಂಬಂಧಿಸಿದಂತೆ, ಕ್ಯಾಲೆಂಡರ್ ಆಫ್ ಇವೆಂಟ್ಸ್ (Calendar of Events)

| ಕ್ರ.ಸಂ. | ವಿವರ | ದಿನಾಂಕ |
|---|---|---|
| 1. | ಅರ್ಜಿ ಕರೆಯಲು ನಿಗಧಿಪಡಿಸಿದ ದಿನಾಂಕ | 17.11.2011 |
| 2. | ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 16.12.2011 |
| 3. | ಜಿಲ್ಲಾಧಿಕಾರಿಗಳು ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | 16.1.2012 |
| 4. | ತಾತ್ಕಾಲಿಕ ಪರಿಶೀಲನಾ ಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲೆಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಹಾಜರಾಗಬೇಕಾದ ದಿನಾಂಕ ಮತ್ತು ಸಮಯ | 23.1.2012 |
| 5. | ಜಿಲ್ಲಾಧಿಕಾರಿ ಕಚೇರಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | 30.1.2012 |
| 6. | ವೆಬ್‌ಸೈಟ್ ವಿಳಾಸ | http://davanagere.nic.in |
| 7. | ಸ್ಪಷ್ಟೀಕರಣ / ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್ ಲೈನ್ | 08192–255118 |

(ಎಸ್.ಎಸ್.ಪಟ್ಟಣಶೆಟ್ಟಿ),
ಅಧ್ಯಕ್ಷರು, ಗ್ರಾಮ ಲೆಕ್ಕಿಗರ ನೇಮಕಾತಿ
ಆಯ್ಕೆ ಪ್ರಾಧಿಕಾರ ಮತ್ತು
ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.